# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 38(108)
ಮಾನ್ಯ ಸದಸ್ಯರ ಹೆಸರು: ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು
ಉತ್ತರಿಸಬೇಕಾದ ದಿನಾಂಕ: 15.07.2024.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ 1 ರಿಂದ 5 ನೇ ತರಗತಿಗೆ ಡಿ.ಎಡ್ ಕಲಿತ ಟಿಇಟಿ ಪಾಸಾದ ಅಭ್ಯರ್ಥಿಗಳ ನೇಮಕಾತಿಯನ್ನು ಕಳೆದ 10 ವರ್ಷಗಳಿಂದ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು; (ಮಾಹಿತಿ ನೀಡುವುದು.) | ಬಂದಿದೆ.<br><br>ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 7500 (ಈ ಪೈಕಿ ಪಿಎಸ್‌ಟಿ {1 ರಿಂದ 5ನೇ ತರಗತಿ} ವೃಂದದ 6300 ಹುದ್ದೆಗಳು ಒಳಗೊಂಡಿವೆ) ಹಾಗೂ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 2500 ಹುದ್ದೆಗಳು ಸೇರಿದಂತೆ ಒಟ್ಟಾರೆ 10000 ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ. |
| ಆ) | ಮುಂಬರುವ ದಿನಗಳಲ್ಲಿ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆ ಮಾಡಿ ಅವಕಾಶ ನೀಡಲಾಗುವುದೇ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು). | ಅಭ್ಯರ್ಥಿಗಳಿಗೆ ವಯೋಮಿತಿ ಸಡಿಲಿಕೆ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |
| ಇ) | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಟ್ಟು ಎಷ್ಟು ಶಿಕ್ಷಕರ ಹುದ್ದೆ ಖಾಲಿ ಇವೆ; (1 ರಿಂದ 5ನೇ ತರಗತಿ) ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು; (ಮಾಹಿತಿ ನೀಡುವುದು). | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ (1 ರಿಂದ 5ನೇ ತರಗತಿ) ಒಟ್ಟು 8931 ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಈ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಹಂತ-ಹಂತವಾಗಿ ಭರ್ತಿ ಮಾಡಲಾಗುವುದು. |
| ಈ) | ಸದರಿ ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು). | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ. |

**ಇಪಿ 33 ಪಿಎಂಎ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು